ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

25

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 12/12/20

# ಕೇಂದ್ರದ ಸಮನ್ಸ್‌ಗೆ ಮಮತಾ ಬ್ಯಾನರ್ಜಿ ಸಡ್ಡು

## ಬಂಗಾಳ ಮುಖ್ಯ ಕಾರ್ಯದರ್ಶಿ, ಡಿಜಿಪಿಗೆ ಸಮನ್ಸ್ | ಅಧಿಕಾರಿಗಳನ್ನು ಕಳಿಸಲ್ಲವೆಂದ ದೀದಿ

**ಹೊಸದಿಲ್ಲಿ/ಕೋಲ್ಕೊತಾ:** ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ಬೆಂಗಾವಲು ವಾಹನದ ಮೇಲೆ ನಡೆದ ದಾಳಿ ಪ್ರಕರಣಕ್ಕೆ ಸಂಬಂಧಿಸಿ ಕೇಂದ್ರ ಸರಕಾರವು ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿ ಹಾಗೂ ಪೊಲೀಸ್ ಮಹಾ ನಿರ್ದೇಶಕರಿಗೆ ಶುಕ್ರವಾರ ಸಮನ್ಸ್ ಜಾರಿ ಮಾಡಿದೆ. ಇದರೊಂದಿಗೆ ಬಿಜೆಪಿ, ಟಿಎಂಸಿ ರಾಜಕೀಯ ಸಂಘರ್ಷ ಹೊಸ ಸ್ವರೂಪ ಪಡೆದುಕೊಂಡಿದೆ.

ಡಿಸೆಂಬರ್ 14ರಂದು ಹಾಜರಾಗಿ ರಾಜ್ಯದಲ್ಲಿನ ಕಾನೂನು ಮತ್ತು ಸುವ್ಯವಸ್ಥೆ, ರಾಜಕೀಯ ಹಿಂಸಾಚಾರ ತಡೆಗಟ್ಟಲು ಕೈಗೊಂಡ ಕ್ರಮಗಳ ಕುರಿತು ವಿವರಣೆ ನೀಡುವಂತೆ ಮುಖ್ಯ ಕಾರ್ಯದರ್ಶಿ ಆಲಾಪನ್ ಬಂಡೋಪಾಧ್ಯಾಯ, ಡಿಜಿಪಿ ವೀರೇಂದ್ರ ಅವರಿಗೆ ಗೃಹ ಸಚಿವಾಲಯ ಸೂಚಿಸಿದೆ. ಆದರೆ, ''ವಿಚಾರಣೆಗೆ ಈ ಇಬ್ಬರೂ ಅಧಿಕಾರಿಗಳನ್ನು ಕಳಿಸುವುದಿಲ್ಲ, ಅದೇನಾಗುತ್ತೋ ನೋಡುತ್ತೇವೆ,'' ಎಂಬ ಖಡಕ್ ಸಂದೇಶವನ್ನು ಟಿಎಂಸಿ ಸರಕಾರ ರವಾನಿಸಿದೆ.

ನಡ್ಡಾ ಅವರು ಕೋಲ್ಕೊತಾದ ಡೈಮಂಡ್ ಹಾರ್ಬರ್‌ಗೆ ಗುರುವಾರ ತೆರಳುತ್ತಿದ್ದ ವೇಳೆ ಅವರ ಬೆಂಗಾವಲು ವಾಹನಗಳ ಮೇಲೆ ದುಷ್ಕರ್ಮಿಗಳ ತಂಡ ಕಲ್ಲು, ಇಟ್ಟಿಗೆಗಳಿಂದ ದಾಳಿ ನಡೆಸಿತ್ತು. ದಾಳಿಯಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೈಲಾಶ್ ವಿಜಯವರ್ಗೀಯ, ಪಶ್ಚಿಮ ಬಂಗಾಳದ ಬಿಜೆಪಿ ಅಧ್ಯಕ್ಷ ದಿಲೀಪ್ ಘೋಷ್ ಅವರ ಕಾರುಗಳೂ ಜಖಂಗೊಂಡಿದ್ದವು. ದಾಳಿ ಘಟನೆ ಕುರಿತಂತೆ ವರದಿ ಸಲ್ಲಿಸುವಂತೆ ರಾಜ್ಯಪಾಲ ಜಗದೀಪ್ ಧನ್‌ಕರ್ ಅವರಿಗೆ ಕೇಂದ್ರ ಸೂಚಿಸಿತ್ತು. ಅವರು ವರದಿ ಸಲ್ಲಿಸಿದ ಬೆನ್ನಲ್ಲೇ ಪಶ್ಚಿಮ ಬಂಗಾಳದ ಈ ಇಬ್ಬರು ಹಿರಿಯ ಅಧಿಕಾರಿಗಳಿಗೆ ಸಮನ್ಸ್ ಜಾರಿಯಾಗಿದೆ. ನಡ್ಡಾ ಅವರ ಭೇಟಿ ವೇಳೆ ಭದ್ರತಾ ಲೋಪವಾಗಿದ್ದರ ಕುರಿತು ಮಮತಾ ಬ್ಯಾನರ್ಜಿ ಅವರ ಸರಕಾರದಿಂದ ಕೇಂದ್ರಕ್ಕೆ ಇನ್ನೂ ವರದಿ ಸಲ್ಲಿಕೆಯಾಗಿಲ್ಲ ಎಂದು ಮೂಲಗಳು ಹೇಳಿವೆ.

**ಅಭಿಷೇಕ್ ಬ್ಯಾನರ್ಜಿ ಮನೆ ಮೇಲೆ ದಾಳಿ:** ಡೈಮಂಡ್ ಹಾರ್ಬರ್ ಕ್ಷೇತ್ರದ ಸಂಸದ ಹಾಗೂ 'ದೀದಿ' ಅವರ ಸೋದರ ಸಂಬಂಧಿ ಅಭಿಷೇಕ್ ಬ್ಯಾನರ್ಜಿ ಅವರ ದಿಲ್ಲಿ ನಿವಾಸದ ಮೇಲೆ ದುಷ್ಕರ್ಮಿಗಳ ತಂಡ ಶುಕ್ರವಾರ ಕಲ್ಲು ತೂರಿ, ನೇಮ್‌ಪ್ಲೇಟ್‌ಗಳನ್ನು ಕಿತ್ತೆಸೆದಿದೆ. ನಡ್ಡಾ ಅವರ ಮೇಲಿನ ದಾಳಿಗೆ ಪ್ರತೀಕಾರವಾಗಿ ಇದು ನಡೆದಿದೆ ಎಂದು ಹೇಳಲಾಗುತ್ತಿದೆ.

### ಬಿಜೆಪಿ ತಾಳಕ್ಕೆ ರಾಜ್ಯಪಾಲರ ಹೆಜ್ಜೆ



''ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರು, ಹುದ್ದೆಯ ಘನತೆ, ಗೌರವ ಮರೆತು ಬಿಜೆಪಿಯ ತಾಳಕ್ಕೆ ತಕ್ಕಂತೆ ಕುಣಿಯುತ್ತಿದ್ದಾರೆ. ದಿಲ್ಲಿ ನಾಯಕರ ಆಣತಿಯಂತೆ ಹೇಳಿಕೆಗಳನ್ನು ನೀಡುತ್ತಿದ್ದಾರೆ,'' ಎಂದು ಆರೋಪಿಸಿರುವ ಸಿಎಂ ಮಮತಾ ಬ್ಯಾನರ್ಜಿ, ಕೇಂದ್ರದ ವಿರುದ್ಧ ಕಿಡಿಕಾರಿದ್ದಾರೆ. ಕೇಂದ್ರ ಗೃಹ ಸಚಿವಾಲಯ ನೀಡಿದ ಸಮನ್ಸ್‌ಗೆ ಪ್ರತಿಕ್ರಿಯಿಸಲು ದಿಲ್ಲಿಗೆ ತೆರಳದಂತೆ ತಮ್ಮ ಸರಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಡಿಜಿಪಿಗೆ ಸೂಚಿಸಿದ್ದಾರೆ. ಇದರ ಬೆನ್ನಲ್ಲೇ ಮುಖ್ಯ ಕಾರ್ಯದರ್ಶಿ ಆಲಾಪನ್ ಬಂಡೋಪಾಧ್ಯಾಯ ಅವರು, ತಾವು ಹಾಗೂ ಡಿಜಿಪಿ ಸಮನ್ಸ್‌ಗೆ ಪ್ರತಿಕ್ರಿಯಿಸಲು ಡಿ.14ರಂದು ದಿಲ್ಲಿಗೆ ಬರುವುದಿಲ್ಲ ಎಂದು ಗೃಹ ಸಚಿವಾಲಯಕ್ಕೆ ಪತ್ರ ಬರೆದಿದ್ದಾರೆ ಎಂದು ಮೂಲಗಳು ತಿಳಿಸಿವೆ.

### ಬೆಂಕಿ ಜತೆ ಸರಸ ಬೇಡ



ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡಲು ರಾಜ್ಯ ಸರಕಾರವೇ ಕಾರಣ ಎಂದು ಜರಿದಿರುವ ರಾಜ್ಯಪಾಲ ಜಗದೀಪ್ ಧನ್‌ಕರ್ ಅವರು ''ರಾಜಭವನ ಅಂಚೆ ಕಚೇರಿಯಲ್ಲ. ಅಂತಾರಾಷ್ಟ್ರೀಯ ಮಾನವ ಹಕ್ಕುಗಳ ದಿನ ದಂದೇ ರಾಜ್ಯದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆಯಾಗಿರುವುದು ದುರದೃಷ್ಟಕರ. ಕಾನೂನು ಸುವ್ಯವಸ್ಥೆ ಹದಗೆಡುತ್ತಿದ್ದರೂ ರಾಜ್ಯಪಾಲರಾದವರು ರಾಜಭವನದ ಹುಲ್ಲುಹಾಸಿನ ಮೇಲೆ ಸುತ್ತಾಡುತ್ತಾ ಕಾಲ ಕಳೆಯಲಾಗದು. ಘಟನೆ ಕುರಿತು ಕೇಂದ್ರಕ್ಕೆ ವರದಿ ಸಲ್ಲಿಸಿದ್ದೇನೆ,'' ಎಂದು ಹೇಳಿದ್ದಾರೆ. ''ಬಿಜೆಪಿಯು ಗೂಂಡಾಗಳನ್ನು ಮುಂದೆಬಿಟ್ಟಿದೆ ಎಂಬ ಹೇಳಿಕೆಗಳು ಮುಖ್ಯಮಂತ್ರಿಗಳಿಗೆ ಶೋಭೆ ತರುವಂತಹದ್ದಲ್ಲ. ರಾಷ್ಟ್ರೀಯ ಹಿತಾಸಕ್ತಿಗೂ ಇದು ಮಾರಕವಾಗಿದೆ,'' ಎಂದಿರುವ ಧನ್‌ಕರ್, ಸಿಎಂ ಮಮತಾ ಬ್ಯಾನರ್ಜಿ ಬೆಂಕಿಯೊಂದಿಗೆ ಸರಸವಾಡುವುದನ್ನು ಬಿಡಬೇಕು ಎಂದು ಎಚ್ಚರಿಸಿದ್ದಾರೆ.